# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ/310 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:12.03.2018

## ಸುತ್ತೋಲೆ

**ವಿಷಯ:** ಮುಖ್ಯಮಂತ್ರಿ ಅನಿಲಭಾಗ್ಯ ಯೋಜನೆಯಡಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಅರ್ಜಿಗಳ ತ್ವರಿತ ವಿಲೇವಾರಿ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಕಾರ್ಯದರ್ಶಿಗಳು, ಆಹಾರ, ನಾಗರೀಕ ಸರಬರಾಜು, ಗ್ರಾಹಕರ ವ್ಯವಹಾರಗಳ ಮತ್ತು ಮಾಪನ ಶಾಸ್ತ್ರ ಇಲಾಖೆ ರವರ ಅ.ಸ.ಸಂಖ್ಯೆ: ಆನಾಸ 374 ಡಿಆರ್ಎ 2017, ದಿನಾಂಕ: 07.03.2018

***

ಮುಖ್ಯಮಂತ್ರಿ ಅನಿಲ ಭಾಗ್ಯ ಯೋಜನೆಯಡಿ ಮೊದಲ ಹಂತದಲ್ಲಿ ಮಾರ್ಚ್ 15 ರೊಳಗಾಗಿ ರಾಜ್ಯಾದ್ಯಂತ 10 ಲಕ್ಷ ಫಲಾನುಭವಿಗಳ ಅರ್ಜಿಗಳನ್ನು ಸ್ವೀಕರಿಸಿ ಉಚಿತ ಅನಿಲ ಸಂಪರ್ಕ ಮತ್ತು ಗ್ಯಾಸ್ ಸ್ಟವ್ ಹಾಗೂ ಸಿಲಿಂಡರ್‌ಗಳ ವಿತರಣೆ ಮಾಡಲು ಉದ್ದೇಶಿಸಿರುವುದಾಗಿ ಉಲ್ಲೇಖಿತ ಪತ್ರದಲ್ಲಿ ಸರ್ಕಾರದ ಕಾರ್ಯದರ್ಶಿಗಳು, ಆಹಾರ, ನಾಗರೀಕ ಸರಬರಾಜು, ಗ್ರಾಹಕರ ವ್ಯವಹಾರಗಳ ಮತ್ತು ಮಾಪನ ಶಾಸ್ತ್ರ ಇಲಾಖೆ ರವರು ತಿಳಿಸಿರುತ್ತಾರೆ. ಸದರಿ ಯೋಜನೆಯಡಿ ಅರ್ಜಿಗಳನ್ನು ಸ್ವೀಕರಿಸಿ ಉಚಿತ ಅನಿಲ ಸಂಪರ್ಕ ಮತ್ತು ಗ್ಯಾಸ್ ಸ್ಟವ್ ಹಾಗೂ ಸಿಲಿಂಡರ್‌ಗಳ ವಿತರಣೆ ಮಾಡುವ ಪ್ರಕ್ರಿಯೆಯನ್ನು ಗ್ರಾಮ ಪಂಚಾಯತಿಗಳ ಮೂಲಕ ತ್ವರಿತವಾಗಿ ಅನುಷ್ಠಾನಗೊಳಿಸಲು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಮುಖ್ಯ ಮಂತ್ರಿ ಅನಿಲ ಭಾಗ್ಯ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕೆಳಗಿನಂತೆ ಕ್ರಮವಹಿಸಲು ತಿಳಿಸಿದೆ.

1. ಅರ್ಹ ಫಲಾನುಭವಿಗಳಿಂದ ಗ್ರಾಮ ಪಂಚಾಯಿತಿಗಳಲ್ಲಿ ತ್ವರಿತವಾಗಿ ಅರ್ಜಿಗಳನ್ನು ಸ್ವೀಕರಿಸಲು ಹಾಗೂ ತಂತ್ರಾಂಶದಲ್ಲಿ ಜನರೇಟ್ ಆಗುವ ಧೃಡೀಕರಣ/ಸ್ವೀಕೃತ ಪತ್ರಗಳನ್ನು ಫಲಾನುಭವಿಗಳಿಗೆ ನೀಡಲು ಕ್ರಮವಹಿಸುವುದು.
2. ಅರ್ಜಿಗಳನ್ನು ಸ್ವೀಕರಿಸಿದ ನಂತರ ಪಂಚತಂತ್ರ ತಂತ್ರಾಂಶದಲ್ಲಿ SECC ಪಟ್ಟಿಯೊಂದಿಗೆ ಪರಿಶೀಲಿಸುವುದು.
3. ಮುಂದಿನ ಹಂತದ ಪ್ರಕ್ರಿಯೆಗಾಗಿ F.I. Login ನಲ್ಲಿ ಅರ್ಜಿಯನ್ನು ವಿಲೇ ಮಾಡಲು ಕಳುಹಿಸುವುದು.
4. ಆಹಾರ ನಿರೀಕ್ಷಕರು, ಉಪ ನಿರ್ದೇಶಕರು ಮತ್ತು ಗ್ಯಾಸ್ ವಿತರಕರಿಂದ ಪರಿಶೀಲಿಸಿ ಆನ್‌ಲೈನ್ ಮೂಲಕ ಅನುಮೋದನೆ ನೀಡುವರು.
5. ಆಹಾರ ನಿರೀಕ್ಷಕರು ಡಿ.ಡಿ. ಪಡೆದು ಅನುಮೋದನೆಗೊಂಡ ಫಲಾನುಭವಿಗಳಿಂದ ಡಿ.ಡಿ ತಲುಪಿಸುವ ಬಗ್ಗೆ ಧೃಢೀಕರಣ ಪಡೆದು ಗ್ಯಾಸ್ ಏಜೆನ್ಸಿಯವರಿಗೆ ತಲುಪಿಸುವರು.
6. ನಂತರ ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ಯಾಸ್ ಸ್ಟೌವ್ ಮತ್ತು ಲೈಟರ್‌ಗಳ ವಿತರಣೆಗೆ ಅವಶ್ಯಕ ಅನುಕೂಲತೆ ಕಲ್ಪಿಸಿಕೊಡಲು ಕ್ರಮ ವಹಿಸುವುದು.

7. ಈ ಯೋಜನೆಯಡಿ ಸಲ್ಲಿಕೆಯಾಗುವ ಪ್ರತಿ ಅರ್ಜಿಗೆ ಗ್ರಾಮ ಪಂಚಾಯತಿಗೆ ರೂ.50.00 ಮತ್ತು ಎಸ್.ಇ.ಸಿ.ಸಿ. ಮಾಹಿತಿ ಪರಿಶೀಲನೆಯಿಂದ ಸ್ಟೌವ್ ವಿತರಣೆವರೆಗೆ ನಡೆಸುವ ಪ್ರಕ್ರಿಯೆಗೆ ಪ್ರತಿ ಅರ್ಜಿಗೆ ರೂ.25.00 ಗಳನ್ನು ನೀಡಲು ಆಹಾರ, ನಾಗರೀಕ ಸರಬರಾಜು, ಗ್ರಾಹಕರ ವ್ಯವಹಾರಗಳ ಮತ್ತು ಮಾಪನ ಶಾಸ್ತ್ರ ಇಲಾಖೆ ಒಪ್ಪಿದ್ದು ಅದರಂತೆ ಪಡೆದುಕೊಳ್ಳಲು ತಿಳಿಸಿದೆ.

ಆಹಾರ, ನಾಗರೀಕ ಸರಬರಾಜು, ಗ್ರಾಹಕರ ವ್ಯವಹಾರಗಳ ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಈ ಮಹತ್ವದ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಲು ಮೇಲ್ಕಂಡಂತೆ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.

12/3/18

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
2) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
4) ರಾಜ್ಯದ ಎಲ್ಲಾ ತಾಲ್ಲೂಕುಗಳ ತಹಶಿಲ್ದಾರರು.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು.
6) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
8) ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.

ಪ್ರತಿಯನ್ನು:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಕಾರ್ಯದರ್ಶಿಗಳು, ಆಹಾರ, ನಾಗರೀಕ ಸರಬರಾಜು, ಗ್ರಾಹಕರ ವ್ಯವಹಾರಗಳ ಮತ್ತು ಮಾಪನ ಶಾಸ್ತ್ರ ಇಲಾಖೆ ರವರ ಆಪ್ತ ಕಾರ್ಯದರ್ಶಿ.